9. ವಿಶ್ವವಿದ್ಯಾಲಯವು, ಕಾಲೇಜಿನ ವಿಧ್ಯಾರ್ಥಿಗಳು, ಭೋಧಕರು ಹಾಗೂ ಭೋಧಕೇತರ ನೌಕರರ ಬಗ್ಗೆ ಕಾಲಕಾಲಕ್ಕೆ ಹೊರಡಿಸುವ ನಿಯಮಾವಳಿ / ಪರಿನಿಯಮಾವಳಿ ಮತ್ತು ಆದೇಶಗಳನ್ನು ಕಾಲೇಜು ಪಾಲಿಸತಕ್ಕದ್ದು, ಕಾಲೇಜು, ವಿಶ್ವವಿದ್ಯಾಲಯದ ಸಂಯೋಜನಾ ಅಧಿಸೂಚನೆಗನುಗುಣವಾಗಿ ಕೋರ್ಸುಗಳಿಗೆ ನಿಗಧಿಪಡಿಸಿರುವ ವಿಧ್ಯಾರ್ಥಿ ಪ್ರಮಾಣವನ್ನು ಮೀರದಂತೆ ಹಾಗೂ ವಿಶ್ವವಿದ್ಯಾಲಯವು ಕೋರ್ಸುಗಳಿಗೆ ನಿಗಧಿಪಡಿಸಿರುವ ಅರ್ಹತಾ ನಿಯಮಾವಳಿಗಳನ್ನು ಉಲ್ಲಂಘಿಸಿದಂತೆ ಕೋರ್ಸುಗಳಿಗೆ ವಿಧ್ಯಾರ್ಥಿಗಳ ಪ್ರವೇಶವನ್ನು ಮಾಡಿಸಿಕೊಳ್ಳತಕ್ಕದ್ದು.

10. ವೈಶಾಕ V/S ರಾಜಸ್ಥಾನದ ರಾಜ್ಯ ಸರ್ಕಾರದ ವ್ಯಾಜ್ಯಕ್ಕೆ ಸಂಬಂಧಿಸಿದಂತೆ, ದಿನಾಂಕ: 13.08.1997ರ ಸರ್ವೋಚ್ಛ ನ್ಯಾಯಾಲಯದ ತೀರ್ಪಿನಂತೆ, ಕಾಲೇಜು ಅಥವಾ ಕಛೇರಿ, ಕೆಲಸ ನಿರ್ವಹಿಸುವ ಸ್ಥಳಗಳಲ್ಲಿ, ಯಾವುದೇ ವ್ಯಕ್ತಿಯಿಂದ (ಭೋಧಕ/ ಭೋಧಕೇತರ/ ಆಡಳಿತ ಮಂಡಳಿ) ಅಥವಾ ವಿಧ್ಯಾರ್ಥಿಯಿಂದ ಮಹಿಳೆಯರಿಗೆ / ವಿದ್ಯಾರ್ಥಿನಿಯರಿಗೆ ಯಾವುದೇ ರೀತಿಯಾದ ಕಿರುಕುಳ, ಲೈಂಗಿಕ ಕಿರುಕುಳ ನೀಡುವುದು ಶಿಕ್ಷಾರ್ಹ ಅಪರಾಧವಾಗಿದೆ. ಯಾವುದೇ ವ್ಯಕ್ತಿ / ವಿಧ್ಯಾರ್ಥಿ ಈ ರೀತಿಯಾದ ಚಟುವಟಿಕೆಗಳಲ್ಲಿ ಭಾಗಿಯಾಗಿದ್ದಲ್ಲಿ ಅಂತಹವರನ್ನು ಕೆಲಸದಿಂದ / ವಿದ್ಯಾರ್ಥಿದೆಸೆಯಿಂದ ವಿಮುಕ್ತಿಗೊಳಿಸಬಹುದಾಗಿದೆ. ಕಾಲೇಜು ಈ ರೀತಿಯ ಅಪರಾಧಗಳನ್ನು / ಚಟುವಟಿಕೆಗಳನ್ನು ಮಟ್ಟಹಾಕಲು ಸರ್ವೋಚ್ಛ ನ್ಯಾಯಲಯದ ಆದೇಶದಂತೆ ದೂರು ಸಮಿತಿಯನ್ನು ಸ್ಥಾಪನೆ ಮಾಡತಕ್ಕದ್ದು.

11. ವಿದ್ಯಾರ್ಥಿಗಳನ್ನು ಶೈಕ್ಷಣಿಕವಾಗಿ ಅಭಿವೃದ್ಧಿಗೊಳಿಸುವ ಮಟ್ಟಕ್ಕೆ ಕಾಲೇಜು ಕೋರ್ಸುಗಳ ಶಿಕ್ಷಣ ಕ್ರಮವನ್ನು ಉತ್ತಮಪಡಿಸತಕ್ಕದ್ದು. ವಿದ್ಯಾರ್ಥಿಗಳನ್ನು ಹಾಗೂ ಸೇವೆಯಲ್ಲಿರುವ ಭೊಧಕರುಗಳನ್ನು ಪ್ರಾಂಶುಪಾಲರು / ಆಡಳಿತಮಂಡಳಿಯವರು ಸಹಾನುಭೂತಿಯಿಂದ ನೋಡಿಕೋಳ್ಳತಕ್ಕದ್ದು.

12. ಕಾಲೇಜು ವಿನಾಕಾರಣ ವಿಧ್ಯಾರ್ಥಿಗಳ ಅಂಕಪಟ್ಟಿ ಹಾಗೂ ಇತರೇ ದಾಖಲೆಗಳನ್ನು ಆರು ತಿಂಗಳ ಅವಧಿ ಮೀರದಂತೆ ತಮ್ಮಲ್ಲಿಯೇ ಇಟ್ಟುಕೊಳ್ಳತಕ್ಕದ್ದಲ್ಲ, ಪ್ರವೇಶ ಅನುಮೋದನೆಗಾಗಿ ಸಲ್ಲಿಸಿರುವ ಅಂಕಪಟ್ಟಿ ಹಾಗೂ ಇತರೇ ದಾಖಲೆಗಳನ್ನು, ಪ್ರವೇಶ ಅನುಮೋದನೆಯಾದ ನಂತರ ವಿಧ್ಯಾರ್ಥಿಗಳಿಗೆ ತ್ವರಿತವಾಗಿ ಅವರಿಗೆ ವಿತರಣೆಯನ್ನು ಮಾಡಿ ವಿಶ್ವವಿದ್ಯಾಲಯಕ್ಕೆ ತಿಳಿಸತಕ್ಕದ್ದು.

13. ವಿದ್ಯಾರ್ಥಿಗಳು, ವರ್ಗಾವಣೆ ಪತ್ರವನ್ನು ನೀಡುವ ಬಗ್ಗೆ ಮನವಿ ಸಲ್ಲಿಸಿದ್ದಲ್ಲಿ, ಕಾಲೇಜು ವಿದ್ಯಾರ್ಥಿಗಳಿಗೆ ಯಾವುದೇ ತೊಂದರೆ ನೀಡದೆ, ವರ್ಗಾವಣೆ ಪತ್ರವನ್ನು ನೀಡತಕ್ಕದ್ದು. ಈ ಬಗ್ಗೆ ಆ ವರ್ಷದ / ಸೆಮೀಸ್ಟರ್‌ನ ಪೂರ್ಣವಾಗದ ಅವಧಿಯ ಭೋಧನಾ ಶುಲ್ಕವನ್ನು ಹೊರೆತುಪಡಿಸಿ, ಯಾವುದೇ ಹೆಚ್ಚುವರಿ ಶುಲ್ಕವನ್ನು ವಸೂಲಿ ಮಾಡಲು ನಿಯಮಾವಳಿ ಪ್ರಕಾರ ಅನುಮತಿ ಇರುವುದಿಲ್ಲ.

14. ಯಾವುದೇ ರೀತಿಯಾದ ಕ್ಯಾಪಿಟೇಷನ್ ಶುಲ್ಕವನ್ನು ಕಾಲೇಜು ವಸೂಲಿ ಮಾಡತಕ್ಕದ್ದಲ್ಲ.

15. 2023–24ನೇ ಸಾಲಿಗೆ ಕೋರ್ಸುಗಳ ಸಂಯೋಜನಾ ನವೀಕರಣಕ್ಕೆ ಕಾಲೇಜು ತಪ್ಪದೆ ಅರ್ಜಿಯನ್ನು ಸಲ್ಲಿಸತಕ್ಕದ್ದು.

16. ಐದು ವರ್ಷಗಳನ್ನು ಪೂರ್ಣೈಸಿರುವ ಕಾಲೇಜುಗಳ ನ್ಯಾಕ್ (NAAC) ಅನುಮೋದನೆಯನ್ನು ಕೂಡಲೇ ಪಡೆದುಕೊಳ್ಳತಕ್ಕದ್ದು.

17. ಪ್ರಾಂಶುಪಾಲರು, ಮೌಲ್ಯಮಾಪನ ಕಾರ್ಯಕ್ಕಾಗಿ ಅರ್ಹ ಶಿಕ್ಷಕರ ಪಟ್ಟಿಯನ್ನು ಸಂಬಂಧಿಸಿದ ಪರೀಕ್ಷಾ ಮಂಡಳಿಗಳ ಅಧ್ಯಕ್ಷರುಗಳಿಗೆ ತಪ್ಪದೇ ಸಲ್ಲಿಸತಕ್ಕದ್ದು. ತಪ್ಪಿದಲ್ಲಿ ಕಾಲೇಜಿನ ಸಂಯೋಜನೆಯನ್ನು ರದ್ದುಪಡಿಸಲಾಗುವುದು.

18. ಪ್ರತಿ ಕಾಲೇಜು ಆಯಾ ಶೈಕ್ಷಣಿಕ ವರ್ಷದಲ್ಲಿ ಕನಿಷ್ಠ ಎರಡು ಆಡಳಿತ ಮಂಡಳಿ (Governing Council) ಸಭೆಗಳನ್ನು ಕಡ್ಡಾಯವಾಗಿ ನಡೆಸಿ ವರದಿಯನ್ನು ವಿಶ್ವವಿದ್ಯಾಲಯಕ್ಕೆ ತಪ್ಪದೇ ಸಲ್ಲಿಸತಕ್ಕದ್ದು.

ಆದೇಶಾನುಸಾರ

ಕುಲಸಚಿವರು

ಕುಲಸಚಿವರು
ಬೆಂಗಳೂರು ಉತ್ತರ ವಿಶ್ವವಿದ್ಯಾಲಯ
ಟಮಕ, ಕೋಲಾರ, ಕರ್ನಾಟಕ–563 103.

ಗೆ,
ಸಂಬಂಧಪಟ್ಟ ಕಾಲೇಜಿನ ಪ್ರಾಂಶುಪಾಲರಿಗೆ,

ಪ್ರತಿಗಳು:

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ, (ವಿಶ್ವವಿದ್ಯಾಲಯ) ಬಹುಮಹಡಿ ಕಟ್ಟಡ, ಡಾ॥ ಅಂಬೇಡ್ಕರ್ ವೀದಿ ಬೆಂಗಳೂರು – 560 001
2. ನಿರ್ದೇಶಕರು, ಕಾಲೇಜು ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು – 560 001.
3. ಕುಲಸಚಿವರು (ಮೌ), ಬೆಂಗಳೂರು ಉತ್ತರ ವಿಶ್ವವಿದ್ಯಾಲಯ, ಶ್ರೀ ದೇವರಾಜ ಅರಸು ಬಡಾವಣೆ, ಟಮಕ, ಕೋಲಾರ– 563 103.
4. ಕಛೇರಿ ಪ್ರತಿ.